# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1434 |
| ಮಾನ್ಯ ಸದಸ್ಯರ ಹೆಸರು | ಶ್ರೀ ಬಿ.ಎಂ.ಫಾರೂಖ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 17.03.2021 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಹಿಂದಿನ ಸರ್ಕಾರ ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಹಿಂದುಳಿದವರ ಕುರಿತು ಸಮೀಕ್ಷೆ ಮಾಡಲಾಗಿದ್ದು, ಈ ವರದಿಯನ್ನು ಸದನದ ಮುಂದೆ ಮಂಡಿಸುವಂತೆ ಈಗಾಗಲೇ ಸದನದಲ್ಲಿ ಒತ್ತಾಯಿಸಿದ್ದು, ಈ ವರದಿಯನ್ನು ಮಂಡಿಸಲು ಸರ್ಕಾರ ಯಾವ ಕ್ರಮಕೈಗೊಂಡಿದೆ; (ಸಂಪೂರ್ಣ ಮಾಹಿತಿ ನೀಡುವುದು) | ಶ್ರೀ ಹೆಚ್. ಕಾಂತರಾಜ ನೇತೃತ್ವದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ರಾಜ್ಯದ ಎಲ್ಲ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು 2015ರಲ್ಲಿ ಕೈಗೊಳ್ಳಲಾಗಿದ್ದು, ಸಮೀಕ್ಷೆಯ ವರದಿಯನ್ನು ಸಿದ್ಧಪಡಿಸಿರುತ್ತದೆ.<br><br>ಶ್ರೀ ಹೆಚ್ ಕಾಂತರಾಜ ರವರ ನೇತೃತ್ವದ ಆಯೋಗದ ಪದಾವಧಿಯು ದಿನಾಂಕ:21.09.2019ರಂದು ಮುಕ್ತಾಯಗೊಂಡ ಹಿನ್ನೆಲೆಯಲ್ಲಿ ಸರ್ಕಾರಕ್ಕೆ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವರದಿಯನ್ನು ಸಲ್ಲಿಸಲಾಗಿರುವುದಿಲ್ಲ.<br><br>ಪ್ರಸ್ತುತ, ಶ್ರೀ ಕೆ. ಜಯಪ್ರಕಾಶ ಹೆಗ್ಡೆ ಇವರ ನೇತೃತ್ವದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ದಿನಾಂಕ:23.11.2020 ರಂದು ಸರ್ಕಾರದಿಂದ ನೇಮಕ ಗೊಂಡಿರುತ್ತದೆ. ಈ ಬಗ್ಗೆ ಪರಿಶೀಲಿಸಿ ಅಗತ್ಯ ಕ್ರಮವಹಿಸಲಾಗುವುದು. |
| ಆ) | ಈ ಸಮೀಕ್ಷೆ ಗೌಪ್ಯವಾಗಿಡಲು ಕಾರಣವೇನು; ಜನರ ನಿರೀಕ್ಷೆಯಂತೆ ಯಾವಾಗ ಇದನ್ನು ಸರ್ಕಾರ ಬಹಿರಂಗಪಡಿಸುತ್ತದೆ; ಈ ಸಮೀಕ್ಷೆಯನ್ನು ನಡೆಸಲು | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸರ್ಕಾರಕ್ಕೆ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವರದಿಯನ್ನು ಸಲ್ಲಿಸಿದ ನಂತರ ಪರಿಶೀಲಿಸಲಾಗುವುದು. |

| | | |
|---|---|---|
| | ಸರ್ಕಾರಕ್ಕೆ ತಗುಲಿರುವ ಒಟ್ಟು ವೆಚ್ಚವೆಷ್ಟು? | ಸಮೀಕ್ಷೆಗಾಗಿ ಇಲ್ಲಿಯವರೆಗೆ ರೂ.162.67 ಕೋಟಿಗಳನ್ನು ವೆಚ್ಚ ಮಾಡಲಾಗಿರುತ್ತದೆ. |

**ಸಂಖ್ಯೆ:**ಹಿಂವಕ 80 ಬಿಸಿಎ 2021

(ಕೋಟ ಶ್ರೀನಿವಾಸ ಪೂಜಾರಿ)
ಮುಜರಾಯಿ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು